**ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ, ಕುಣಿಗಲ್.**

**ಸಿ.ಸಿ.ನಂ.4764/2023**

ಸಿ.ಡಬ್ಲ್ಯೂ -07
ಪಿ.ಡಬ್ಲ್ಯೂ-06

| | |
|---|---|
| ಸಾಕ್ಷಿದಾರನ ಹೆಸರು | ನಾರಾಯಣ |
| ತಂದೆಯ ಹೆಸರು | ಕರಿಯಲ್ಲಯ್ಯ |
| ವಯಸ್ಸು | 60 ವರ್ಷ |
| ಉದ್ಯೋಗ | ಕೂಲಿ |
| ವಾಸ | ಅಮೃತೂರು |

**ಸಾಕ್ಷಿಗೆ ದಿಃ 23.06.2026 ರಂದು ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ಸ್ಥಳ ಪಂಚನಾಮೆಗೆ ನನ್ನ ಹೆಬ್ಬಟ್ಟಿನ ಗುರುತು ಇರುತ್ತದೆ. ಸದರಿ ಸಹಿಯನ್ನು 4 ವರ್ಷಗಳ ಹಿಂದೆ ಅಮೃತೂರುನಲ್ಲಿ ಪೋಲಿಸರ ಹೇಳಿಕೆ ಮೇರೆಗೆ ಸಹಿ ಮಾಡಿರುತ್ತೇನೆ. ಆ ದಿನ ನನ್ನ ಜೊತೆ ಯಾರು ಇರಲಿಲ್ಲ. ನನ್ನ ಸಮಕ್ಷಮ ಏನನ್ನು ಜಪ್ತು ಮಾಡಿರುವುದಿಲ್ಲ. ಪಂಚನಾಮೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಸದರಿ ಪಂಚನಾಮೆಯನ್ನು ನಿ.ಪಿ 2 ಎಂದು ಗುರುತಿಸಲಾಗಿದೆ.

**(ಈ ಹಂತದಲ್ಲಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಿಲಾಗಿದೆ. )**

**ಪಾಟೀ ಸವಾಲುಃ ಸಹಾಯಕ ಅಭಿಯೋಜಕರಿಂದಃ**

ದಿಃ 29.11.2022 ರಂದು ಬೆಳಿಗ್ಗೆ 9 ರಿಂದ 10 ಗಂಟೆಯವರೆಗೆ ಪೋಲಿಸರು ಸ್ಥಳ ಪಂಚನಾಮೆಯನ್ನು ಘಟನಾ ಸ್ಥಳದಲ್ಲಿ ನನ್ನ ಹಾಗೂ ಚಾಸಾ 6 ಅವರ ಸಮಕ್ಷಮ ಮಹಜರ ಮಾಡಿ ಒಂದು ಕಾಡು ಕಲ್ಲು ಮತ್ತು ಬಿದುರು ದೊಣ್ಣೆ ಹಾಗೂ 1 ಹಸಿರು ಬಣ್ಣದ ಜಾಕೇಟನ್ನು

ಜಪ್ತು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆಯನ್ನುಮಾಡಿದ್ದರು ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲವೆಂದು ನಿವೇದಿಸಿಕೊಂಡಿರುತ್ತಾರೆ.**

**ಮರು ವಿಚಾರಣೆ ಇಲ್ಲಃ**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.